ವಿಶ್ವ ಆರೋಗ್ಯ ದಿನ

ಹುಬ್ಬಳಿ : ಸ್ಥಳೀಯ ಕೆ.ಎಲ್.ಇ ಸಂಸ್ಥೆಯ ಶಿಕ್ಷಣ ಮಹಾವಿದ್ಯಾಲಯ ಹಾಗೂ ಸ್ನಾತಕೋತ್ತರ ಶಿಕ್ಷಣ ವಿಭಾಗ ವಿದ್ಯಾನಗರ ಹುಬ್ಬಳ್ಳಿಯಲ್ಲಿ ದಿನಾಂಕ 07.04.2022 **ರಂದು ವಿಶ್ವ ಆರೋಗ್ಯ** ದಿನಾಚಾರಣೆಯನ್ನು ವಿಶಿಷ್ಟವಾಗಿ ಆಚರಿಸಲಾಯಿತು. ಇದೇ ಸಂದರ್ಭದಲ್ಲಿ ಅಧ್ಯಕ್ಷತೆಯನ್ನು ವಹಿಸಿದ್ದ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ ಲಿಂಗರಾಜ ಸಿ ಮುಳ್ಳಳ್ಳಿ ಅವರು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡುತ್ತಾ ಆರೋಗ್ಯದ ಕುರಿತು ಧ್ಯಾನ, ಯೋಗ, ಶುಚಿತ್ವದ ಬಗ್ಗೆ ತಿಳಿಸಿಕೊಡುತ್ತಾ ಆರೋಗ್ಯವನ್ನು ವೃದ್ಧಿಸಿಕೊಳ್ಳಲು ಕರೆಕೊಟ್ಟರು. ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಡಾ ಜಯಶ್ರೀ. ಸಿ. ಕುಂದಗೋಳಮಠ ಅವರು ವಹಿಸಿದ್ದರು. ಕಾರ್ಯಕ್ರಮವು ದ್ವಿತೀಯ ವರ್ಷದ ಪ್ರಶಿಕ್ಷಣಾರ್ಥಿಗಳಾದ ಮೇಘನಾ ಮಿರಜಕರ್ ಮತ್ತು ರಚನಾ ರವರ ಪ್ರಾರ್ಥನೆ ಗೀತೆಯೊಂದಿಗೆ ಪ್ರಾರಂಭವಾಯಿತು. ಪ್ರಥಮ ವರ್ಷದ ಪ್ರಶಿಕ್ಷಣಾರ್ಥಿಯಾದ ಮೂಲಿಮನಿ ಮಾತನಾಡಿ ನಮ್ಮ ಜೀವನದಲ್ಲಿ ಹಣ ಕೊಟ್ಟು ಎಲ್ಲವನ್ನು ಕೊಂಡುಕೊಳ್ಳಬಹುದು ವಿನಃ ಆರೋಗ್ಯವನ್ನು ಕೊಂಡಕೋಳ್ಳಲು ಆಗದು. ಎಂದು ತಮ್ಮ ಅಭಿಪ್ರಾಯವನ್ನು ಹಂಚಿಕೊಂಡರು. ದ್ವಿತೀಯ ವರ್ಷದ ಪ್ರಶಿಕ್ಷಣಾರ್ಥಿಯಾದ ಜಟ್ಟೆಪ್ಪಾ ಮೇಟಗಾರ ಅವರು ಸೂರ್ಯನಮಸ್ಕಾರ ಹಾಕಿ ಆರೋಗ್ಯದಲ್ಲಿ ಯೋಗದ ಪಾತ್ರ ಕುರಿತು ತಿಳಿಸಿಕೊಟ್ಟರು. ಕಾರ್ಯಕ್ರಮದ ನಿರೂಪಣೆಯನ್ನು ದ್ವಿತೀಯ ವರ್ಷದ ಪ್ರಶಿಕ್ಷಣಾರ್ಥಿಯಾದ ಪವಿತ್ರಾ ಅಕ್ಕಿ ನೆರವೇರಿಸಿದರು. ಕೊನೆಯದಾಗಿ ವಂದನಾರ್ಪಣೆ ಕಾರ್ಯಕ್ರಮವನ್ನು ದ್ವೀತಿಯ ವರ್ಷದ ಪ್ರಶಿಕ್ಷಣಾರ್ಥಿಯಾದ ಪದ್ಮಾ ಕಾಂಬಳೆ ನೆರವೇರಿಸಿದರು. ಕಾರ್ಯಕ್ರಮದಲ್ಲಿ ಎಲ್ಲಾ ಬೋಧಕ ಮತ್ತು ಬೋಧಕೇತರ ಸಿಬ್ಬಂಧಿ ವರ್ಗದವರು ಹಾಗೂ ಪ್ರಥಮ ಮತ್ತು ದ್ವಿತೀಯ ವರ್ಷದ ಪ್ರಶಿಕ್ಷಣಾರ್ಥಿಗಳು ಹಾಜರಿದ್ದರು.



KLE Society's, College of Education,
P.G.Department of Education,
Vidyanagar Hubballi